**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಎನ್.ಎಸ್. ಭೋಸರಾಜು, ಶ್ರೀ ಶರಣಪ್ಪ ಮಟ್ಟೂರು ಹಾಗೂ ಶ್ರೀ ಬಸವರಾಜ ಪಾಟೀಲ್ ಇಟಗಿ ಇವರುಗಳು ನಿಯಮ 330ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

*******

<u>ವಿಷಯ:</u>

ರಾಯಚೂರು ವಿಶ್ವವಿದ್ಯಾಲಯವನ್ನು ಹೊಸದಾಗಿ ರಾಯಚೂರಿನಲ್ಲಿ ಪ್ರಾರಂಭಿಸಲು 2017-18ರ ಆಯವ್ಯಯದಲ್ಲಿ ಸರ್ಕಾರವು ಘೋಷಣೆ ಮಾಡಿ, ದಿನಾಂಕ: 23-02-2018ರಂದು ನಡೆದ ಅಧಿವೇಶನದ ಎರಡು ಸದನದಲ್ಲಿ ಚರ್ಚೆ ನಡೆದು ಪಕ್ಷಾತೀತವಾಗಿ ಒಪ್ಪಿಗೆಯನ್ನು ಸೂಚಿಸಿರುತ್ತದೆ.. ಇದರ ಪ್ರಯುಕ್ತ 26-03-2018ರಂದು ಮಾನ್ಯಶ್ರೀ ಪ್ರೊಫೆಸರ್ ಮುಜಾಫರ್ ಅಸಾದಿಯವರನ್ನು ವಿಶೇಷ ಕರ್ತವ್ಯಾಧಿಕಾರಿಯನ್ನಾಗಿ ಸರ್ಕಾರವು ನೇಮಕಗೊಳಿಸಿರುತ್ತದೆ ಹಾಗೂ ಜೂನ್ 2019ರಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಯಚೂರಿನಲ್ಲಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ನಿರ್ಧಾರವನ್ನು ತೆಗೆದುಕೊಂಡಿದ್ದು, ಈ ಸಂಬಂಧ ಸುಗ್ರೀವಾಜ್ಞೆಯನ್ನು ಹೊರಡಿಸಲು ಆದೇಶವನ್ನು ನೀಡಿದೆ. 2019ರ ಜುಲೈನಲ್ಲಿ ನಡೆದ ವಿಧಾನಮಂಡಲದ ಅಧಿವೇಶನದಲ್ಲಿ ಪುನ: ಅನುಮತಿಗಾಗಿ ಮಂಡಿಸಲಾಗಿದ್ದು, ಸರ್ಕಾರವು ಬದಲಾದ ಕಾರಣ ಇನ್ನೂ ವಿಳಂಬವಾಗಿರುತ್ತದೆ. ಆದುದರಿಂದ ಕೂಡಲೇ ರಾಯಚೂರು ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಈ ವಿಚಾರವು ಸಾರ್ವಜನಿಕ ಮಹತ್ವವುಳ್ಳ ವಿಷಯವಾಗಿರುವ ಬಗ್ಗೆ.

## <u>ಸರ್ಕಾರದ ಉತ್ತರ</u>

ಗುಲ್ಬರ್ಗಾ ವಿಶ್ವವಿದ್ಯಾಲಯವನ್ನು ವಿಭಜಿಸಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳನ್ನು ಒಳಗೊಂಡು ರಾಯಚೂರಿನಲ್ಲಿ ರಾಯಚೂರು ವಿಶ್ವವಿದ್ಯಾಲಯವನ್ನು ಹೊಸದಾಗಿ ಪ್ರಾರಂಭಿಸಲು 2017-18ರ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿತ್ತು. ಈ ಘೋಷಣೆಯ ಅನುಷ್ಠಾನ ಸಂಬಂಧ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮಕ್ಕೆ 2000ಕ್ಕೆ ತಿದ್ದುಪಡಿ ತರಲು ಕರಡು ವಿಧೇಯಕವನ್ನು ಸಿದ್ಧಪಡಿಸಿ. ಸಂಸದೀಯ ವ್ಯವಹಾರಗಳ ಇಲಾಖೆಗೆ ಸಲ್ಲಿಸಲಾಗಿತ್ತು. ಈ ಮಧ್ಯೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮಕ್ಕೆ 2000ಕ್ಕೆ ಸಮಗ್ರ ತಿದ್ದುಪಡಿಯನ್ನು ತರಲು 2017-18ರ ಆಯವ್ಯಯದಲ್ಲಿ ಘೋಷಣೆ ಮಾಡಲಾಗಿದ್ದು, ಈ ಸಂಬಂಧ ರಚಿಸಲಾದ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ 2017ರಲ್ಲಿ ರಾಯಚೂರು ವಿಶ್ವವಿದ್ಯಾಲಯದ ಸ್ಥಾಪನೆ ಕುರಿತ ಘೋಷಣೆಯನ್ನು ಸೇರ್ಪಡೆಗೊಳಿಸುವಂತೆ ಸಂಸದೀಯ ವ್ಯವಹಾರಗಳ ಇಲಾಖೆಯಿಂದ ತಿಳಿಸಲಾಗಿತ್ತು.

ಅದರಂತೆ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ 2017ರಲ್ಲಿ ರಾಯಚೂರು ವಿಶ್ವವಿದ್ಯಾಲಯದ ಸ್ಥಾಪನೆ ಕುರಿತ ಪ್ರಸ್ತಾವನೆಯನ್ನು ಸೇರ್ಪಡೆಗೊಳಿಸಿ ಸಚಿವ ಸಂಪುಟದ ಅನುಮೋದನೆಯೊಂದಿಗೆ ಕರ್ನಾಟಕ ವಿಧಾನ ಮಂಡಲದ ಉಭಯ ಸದನಗಳ ಅಂಗೀಕಾರದೊಂದಿಗೆ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ಸದರಿ ವಿಧೇಯಕವನ್ನು ಪರಿಶೀಲನೆ ನಡೆಸಿದ ಗೌರವಾನ್ವಿತ ರಾಜ್ಯಪಾಲರು, ವಿಧೇಯಕದ ಅಂಗೀಕಾರಕ್ಕಾಗಿ ಗೌರವಾನ್ವಿತ ಭಾರತದ ರಾಷ್ಟ್ರಪತಿಗಳಿಗೆ ಸಲ್ಲಿಸಿರುತ್ತಾರೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ 2017 ಗೌರವಾನ್ವಿತ ಭಾರತದ ರಾಷ್ಟ್ರಪತಿಗಳಿಂದ ಅಂಗೀಕಾರವಾಗದಿರುವುದರಿಂದ, ರಾಯಚೂರು ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಕ್ಕಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮಕ್ಕೆ 2000ಕ್ಕೆ ಅಧ್ಯಾದೇಶದ ಮೂಲಕ ತಿದ್ದುಪಡಿ ತರಲು ಕರಡು ವಿಧೇಯಕವನ್ನು ರಚಿಸಿ, ಸಚಿವ ಸಂಪುಟದ ಅನುಮೋದನೆಯೊಂದಿಗೆ ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗೆ ಸಲ್ಲಿಸಲಾಗಿತ್ತು, ಅಧ್ಯಾದೇಶವನ್ನು ಹೊರಡಿಸುವ ತುರ್ತು ಅಗತ್ಯತೆಯ ಕುರಿತು ಗೌರವಾನ್ವಿತ ರಾಜ್ಯಪಾಲರ ಸಚಿವಾಲಯದಿಂದ ಸ್ಪಷ್ಟೀಕರಣ ಕೋರಲಾಗಿದ್ದು, ಅದರಂತೆ, ಸ್ಪಷ್ಟನೆಯೊಂದಿಗೆ ಕಡತವನ್ನು ಸಂಸದೀಯ ವ್ಯವರಹಾರಗಳ ಇಲಾಖೆಗೆ ಸಲ್ಲಿಸಲಾಗಿತ್ತು.

ಪ್ರಸ್ತುತ, ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದಿರುವುದರಿಂದ, ಸದರಿ ವಿಧೇಯಕವನ್ನು ಮತ್ತೊಮ್ಮೆ ಸಚಿವ ಸಂಪುಟದ ಅನುಮೋದನೆಯೊಂದಿಗೆ ಸಲ್ಲಿಸುವಂತೆ ಸಂಸದೀಯ ವ್ಯವರಹಾರಗಳ ಇಲಾಖೆಯು ಅಭಿಪ್ರಾಯ ನೀಡಿದ ಹಿನ್ನಲೆಯಲ್ಲಿ ಮತ್ತೊಮ್ಮೆ ಸಚಿವ ಸಂಪಟದ ಅನುಮೋದನೆಯನ್ನು ಪಡೆದು ಮುಂಬರುವ ಅಧಿವೇಶನದಲ್ಲಿ ಉಭಯ ಸದನಗಳ ಅಂಗೀಕಾರಕ್ಕಾಗಿ ಮಂಡಿಸಲಾಗುವುದು.

---

**ಸಂ. ಇಡಿ 270 ಯುಜಿವಿ 2019**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**

**ಉಪ ಮುಖ್ಯಮಂತ್ರಿಗಳು**

**(ಉನ್ನತ ಶಿಕ್ಷಣ, ಐಟಿ & ಬಿಟಿ,**

**ವಿಜ್ಞಾನ ಮತ್ತು ತಂತ್ರಜ್ಞಾನ, ವೈದ್ಯಕೀಯ ಶಿಕ್ಷಣ ಇಲಾಖೆ)**